ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:ಆಯವ್ಯಯ:ಸುತ್ತೋಲೆ:ಸಪ್ರದಕಾ:21:2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು. ದಿನಾಂಕ: 17.11.2020

## ಸುತ್ತೋಲೆ

ವಿಷಯ: ಅತಿಥಿ ಉಪನ್ಯಾಸಕರಿಗೆ ಲಾಕ್‌ಡೌನ್ ಅವಧಿಯ ಗೌರವಧನ ಪಾವತಿಸುವ ಕುರಿತು

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಇಡಿ:166:ಹೆಚ್‌ಪಿಸಿ:2020 ದಿನಾಂಕ:13.11.2020

****

ಅತಿಥಿ ಉಪನ್ಯಾಸಕರುಗಳಿಗೆ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಲಾಕ್‌ಡೌನ್ ಪ್ರಾರಂಭವಾದ ದಿನಾಂಕ:23.03.2020 ರಿಂದ 31.08.2020ರವರೆಗೆ ವಿಶೇಷ ಪ್ರಕರಣದಡಿಯಲ್ಲಿ ಕರ್ತವ್ಯದ ಅವಧಿ ಎಂದು ಪರಿಗಣಿಸಿ ಗೌರವಧನವನ್ನು ಪಾವತಿಸಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಅನುಮತಿಯನ್ನು ನೀಡಿ ಆದೇಶಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ಜಿಲ್ಲಾ lead college ಪ್ರಾಂಶುಪಾಲರಿಗೆ ಮಾರ್ಚ್-2020ರ ಮಾಹೆಯಲ್ಲಿದ್ದಂತೆ ಪ್ರತಿ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರ ಸಂಖ್ಯೆ, ಮಾರ್ಚ್-2020ರ ಮಾಹೆಗೆ ಸದರಿ ಅತಿಥಿ ಉಪನ್ಯಾಸಕರಿಗೆ ಪಾವತಿಸಬೇಕಾಗಿದ್ದ ಗೌರವಧನದ ಮೊತ್ತ, ಈಗಾಗಲೇ ಕೇಂದ್ರ ಕಛೇರಿಯಿಂದ ಬಿಡುಗಡೆ ಮಾಡಿರುವ ಅನುದಾನದಲ್ಲಿ ಪಾವತಿಸಿರುವ ಮೊತ್ತ ಮತ್ತು ಬಾಕಿ ಪಾವತಿಸಬೇಕಾಗಿರುವ ಗೌರವಧನದ ಮೊತ್ತದ ವಿವರವನ್ನು ಆಯಾ ಜಿಲ್ಲಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ಪಡೆದು ಸಾಫ್ಟ್ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚನೆಯನ್ನು ನೀಡಲಾಗಿದೆ. ಮುಂದುವರೆದು, ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಪ್ರಾಂಶುಪಾಲರುಗಳು ಮಾರ್ಚ್-2020ರ ಮಾಹೆಯ ಅತಿಥಿ ಉಪನ್ಯಾಸಕರ ಗೌರವಧನ ಮಾಹಿತಿಯ ಇ.ಎಂ.ಐ.ಎಸ್‌ನ ಪ್ರತಿ ಹಾಗೂ ಮಾರ್ಚ್-2020ರ ಮಾಹೆಯ ಹಾಜರಾಗಿ ಪುಸ್ತಕದ ಜೆರಾಕ್ಸ್ ಪ್ರತಿಯನ್ನು ದೃಢೀಕರಣದೊಂದಿಗೆ ಆಯಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಮಾತ್ರ ಇಂದೇ ಇ-ಮೇಲ್ ಮೂಲಕ ಸಲ್ಲಿಸಲು ಹಾಗೂ ಸದರಿ ಮಾಹಿತಿಯನ್ನು ಕೇಂದ್ರ ಕಛೇರಿಯ ಇ-ಮೇಲ್ ಅಥವಾ ಅಂಚೆ ವಿಳಾಸಕ್ಕೆ ಸಲ್ಲಿಸದಿರಲು ಸೂಚಿಸಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು
17/11/2020

ಇವರಿಗೆ:

ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.